ಸಂಖ್ಯೆ:ಗ್ರಾ.ಲೆ.ಸಿಬ್ಬಂದಿ.ಸಿಆರ್. 01/15-16

ಜಿಲ್ಲಾಧಿಕಾರಿಯವರ ಕಛೇರಿ
ತುಮಕೂರು ಜಿಲ್ಲೆ
ತುಮಕೂರು, ದಿನಾಂಕ:16.04.2015.

# -:ಅಧಿಸೂಚನೆ:-

ತುಮಕೂರು ಜಿಲ್ಲೆಯ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳಲ್ಲಿ 2015-16ನೇ ಸಾಲಿಗೆ 70 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಪತ್ರ ಸಂಖ್ಯೆ ಕಂಇ 31 ಬಿಎಸ್‌ಸಿ 2014, ದಿನಾಂಕ.01.09.2014ರಲ್ಲಿ ಅನುಮತಿಯನ್ನು ನೀಡಿದ್ದು, ಪರಿಷ್ಕತ ನಿಯಮಗಳಂತೆ ನೇರ ನೇಮಕಾತಿ ಮಾಡಲು 70 ಹುದ್ದೆಗಳಿಗೆ ವರ್ಗೀಕರಣ ಮತ್ತು ಮೀಸಲಾತಿ ಅನ್ವಯ ಕರ್ನಾಟಕ ನಾಗರಿಕ ಸೇವೆಗಳು (Revenue subordinate Branch) ( Cadre & Recruitment) (Amendment) ನಿಯಮಗಳು 2008ರ ನಿಯಮ 2ರ ಮತ್ತು 2009ರ ಅನ್ವಯ ನೇಮಕಾತಿಯನ್ನು ಮಾಡಲು ಪ್ರಾಧಿಕಾರವು ನಿಗದಿಪಡಿಸಿರುವ ನಮೂನೆಯಲ್ಲಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಅನ್ ಲೈನ್ ಮೂಲಕ ಆಹ್ವಾನಿಸಲಾಗಿದೆ.

**ಜಿಲ್ಲೆಯಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳಲ್ಲಿ 2015-16ನೇ ಸಾಲಿಗೆ ಒಟ್ಟು 70 ಗ್ರಾಮಲೆಕ್ಕಿಗರ ಹುದ್ದೆಗಳ ವರ್ಗೀಕರಣ ಈ ಕೆಳಕಾಣಿಸಿದಂತೆ ಮಾಡಲಾಗಿದೆ.**

**3ನೇ ಸೈಕಲ್‌ನ ರೋಸ್ಟರ್ ಬಿಂದು 39 ರಿಂದ ಪುನರಾರಂಭಿಸಿ 100ರ ವರೆಗೆ ಹಾಗೂ 4ನೇ ಸೈಕಲ್‌ನ ರೋಸ್ಟರ್ ಬಿಂದು 1 ರಿಂದ ಪುನರಾರಂಭಿಸಿ 08ರ ವರೆಗೆ ಒಟ್ಟು 70 ಗ್ರಾಮಲೆಕ್ಕಿಗರ ಹುದ್ದೆಗಳಿಗೆ ವರ್ಗೀಕರಿಸಲಾಗಿದೆ.**

| ಕ್ರ. ಸಂ | ಮೀಸಲಾತಿ | ಸಾಮಾನ್ಯ | ಕನ್ನಡ ಮಾಧ್ಯಮ | ಮಹಿಳೆ | ಯೋಜನಾ ನಿರಾಶ್ರಿತರು | ಗ್ರಾಮೀಣ | ಮಾಜಿ ಸೈನಿಕ | ಅಂಗವಿಕಲ | ಒಟ್ಟು |
|---|---|---|---|---|---|---|---|---|---|
| 1 | ಪ.ಜಾ | 2 | 0 | 3 | 1 | 2 | 1 | 1 | 10 |
| 2 | ಪ.ಪಂ | 0 | 0 | 1 | 0 | 1 | 1 | 0 | 03 |
| 3 | ಪ್ರ.1 | 1 | 0 | 1 | 0 | 1 | 0 | 0 | 03 |
| 4 | ಪ್ರ-2(ಎ) | 2 | 0 | 3 | 1 | 2 | 1 | 1 | 10 |
| 5 | ಪ್ರ-2(ಬಿ) | 1 | 0 | 1 | 0 | 0 | 0 | 0 | 02 |
| 6 | ಪ್ರ-3(ಎ) | 1 | 0 | 1 | 0 | 0 | 1 | 0 | 03 |
| 7 | ಪ್ರ-3(ಬಿ) | 0 | 1 | 2 | 0 | 1 | 0 | 0 | 04 |
| 8 | ಸಾಮಾನ್ಯ | 7 | 2 | 10 | 1 | 9 | 4 | 2 | 35 |
| | ಒಟ್ಟು | 14 | 3 | 22 | 3 | 16 | 8 | 4 | 70 |

1 **ಅರ್ಜಿಯನ್ನು ಸಲ್ಲಿಸುವ ವಿಧಾನ :-**

ಅರ್ಜಿಯನ್ನು ಅನ್-ಲೈನ್ [online] ಅಂತರ್ಜಾಲ **(Internet)** ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು. ಅರ್ಜಿಯನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ. ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2 **ಅರ್ಜಿ ಶುಲ್ಕ:-**

**ಸರ್ಕಾರದ ಸುತ್ತೋಲೆ ಸಂ.ಕಂಇ 34 ಪ್ರಕಾ 2009, ದಿನಾಂಕ 26.09.2009ರಂತೆ**

| | |
|---|---|
| ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ-1/ಮಹಿಳೆ | ರೂ.100=00/- |
| ಸಾಮಾನ್ಯ / ವರ್ಗ 2ಎ/2ಬಿ/3ಎ/3ಬಿ | ರೂ.200=00/- |

-2

3. ಆನ್-ಲೈನ್ ಅರ್ಜಿ ಸಲ್ಲಿಸುವ ವಿಧಾನ :-

ಅಭ್ಯರ್ಥಿಯು ತುಮಕೂರು ಜಿಲ್ಲಾ ಕಂದಾಯ ಘಟಕದ ಅಧಿಕೃತ ವೆಬ್-ಸೈಟ್ http://tumkur-va.kar.nic.in ತೆರೆದು ಕಂಪ್ಯೂಟರ್ ಪರದೆಯ ಮೇಲೆ ಅರ್ಜಿಯನ್ನು ತುಂಬಬೇಕು ಹಾಗೂ ಇತ್ತೀಚಿನ ಭಾವ ಚಿತ್ರವನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ ಮಾಡಬೇಕು ನಂತರ ಅಭ್ಯರ್ಥಿಯು Submit Button ಅನ್ನು ಒತ್ತಿದರೆ ಅರ್ಜಿ ಸಂಖ್ಯೆ (Reference Number) ನೊಂದಿಗೆ (Acknowledgement slip) ಹಾಗೂ ದ್ವಿಪ್ರತಿ ಚಲನ್ ಕಂಪ್ಯೂಟರ್ ಪರದೆ ಮೇಲೆ ಸೃಷ್ಠಿಯಾಗುತ್ತದೆ. ಹೀಗೆ ಅರ್ಜಿಯನ್ನು ಅನ್ ಲೈನ್ ಮೂಲಕ ಸಲ್ಲಿಸಿದ ನಂತರ ದ್ವಿಪ್ರತಿ ಚಲನ್‌ನಲ್ಲಿ ಅರ್ಜಿ ಶುಲ್ಕವನ್ನು ಬ್ಯಾಂಕ್ ಸೇವಾ ಶುಲ್ಕದೊಂದಿಗೆ ಸ್ಟೇಟ್ ಬ್ಯಾಂಕ್ ಆಫ್ ಮೈಸೂರು ಇವರ ಯಾವುದಾದರೂ ಶಾಖೆಯಲ್ಲಿ ಪಾವತಿಸಬೇಕು. ಅಭ್ಯರ್ಥಿಗಳು ಸ್ವೀಕೃತಿ ಸ್ಲಿಪ್‌ಅನ್ನು ಮತ್ತು ಶುಲ್ಕ ಪಾವತಿಸಿದ ಚಲನ್ ಒಂದು ಪ್ರತಿಯನ್ನು ಕಡ್ಡಾಯವಾಗಿ ತಮ್ಮ ಬಳಿ ಇರಿಸಿಕೊಳ್ಳತಕ್ಕದ್ದು ಇನ್ನೊಂದು ಚಲನ್ ಪ್ರತಿ ಬ್ಯಾಂಕ್ ಬಳಿ ಇರುತ್ತದೆ. ಈ ದಾಖಲೆಗಳನ್ನು ಪರಿಶೀಲನೆಗೆ ತಾತ್ಕಾಲಿಕ ಪಟ್ಟಿಯಲ್ಲಿ ಪ್ರಕಟಿಸಲಾಗುವ ಅಭ್ಯರ್ಥಿಗಳು ಹಾಜರುಪಡಿಸತಕ್ಕದ್ದು. ಬ್ಯಾಂಕಿನಲ್ಲಿ ನಿಗಧಿತ ಅರ್ಜಿ ಶುಲ್ಕ ಪಾವತಿಸಲು ಕೊನೆಯ ದಿನಾಂಕ:-23.05.2015 ಆಗಿರುತ್ತದೆ. ನಿಗಧಿತ ಅರ್ಜಿ ಶುಲ್ಕ ಹಾಗೂ ಬ್ಯಾಂಕ್ ಸೇವಾ ಶುಲ್ಕ ಪಾವತಿಸಬೇಕಾಗುತ್ತೆದೆ. ನಗದು, ಡಿ.ಡಿ, ಪೋಸ್ಟಲ್ ಆರ್ಡರ್ ಮತ್ತು ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಅಲ್ಲದೆ ಒಮ್ಮೆ ಅರ್ಜಿ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ. ಅಥವಾ ಅದನ್ನು ಇತರ ಯಾವುದೇ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಅಭ್ಯರ್ಥಿಗಳು ಅರ್ಜಿಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕ:20.05.2015ರ ಒಳಗೆ ಅನ್‌ಲೈನ್ ಮೂಲಕ ಅರ್ಜಿ ಸಲ್ಲಿಸತಕ್ಕದ್ದು.

A) ಅರ್ಜಿಗಳನ್ನು ದಿನಾಂಕ 20.04.2015 ರಿಂದ 20.05.2015ರ ಒಳಗೆ ಸಲ್ಲಿಸತಕ್ಕದ್ದು.

B) ಅರ್ಜಿ ಶುಲ್ಕವನ್ನು ದಿನಾಂಕ 20.04.2015 ರಿಂದ 23.05.2015ರ ವರೆಗೆ ಸ್ಟೇಟ್ ಬ್ಯಾಂಕ್ ಆಫ್ ಮೈಸೂರು ಬ್ಯಾಂಕ್‌ನ ಶಾಖೆಯಲ್ಲಿ ಬ್ಯಾಂಕ್ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು. ಹಾಗೂ ಶುಲ್ಕ ಪಾವತಿ ನಂತರ ಅನ್‌ಲೈನ್ ಮೂಲಕ ತಂತ್ರಾಂಶದ ಸೂಚನೆಯನ್ನು ಪಾಲಿಸಿ ಸ್ಕ್ಯಾನ್ ಮಾಡಿದ ಚಲನ್ (ಬ್ಯಾಂಕಿನಲ್ಲಿ ಅರ್ಜಿ ಶುಲ್ಕ ಸಂದಾಯ ಮಾಡಿ ಬ್ಯಾಂಕ್ ಮೊಹರು ಹಾಕಲಾದ ಚಲನ್) ಅಪ್‌ಲೋಡ್ (Uploading Challan Option) ಮಾಡತಕ್ಕದ್ದು ಇದು ಅಭ್ಯರ್ಥಿಯ ಜವಾಬ್ದಾರಿಯಾಗಿರುತ್ತದೆ. (ಅರ್ಜಿ ಶುಲ್ಕ ಪಾವತಿಸಿರುವ ಚಲನ್ (ಬ್ಯಾಂಕಿನಿಂದ ಹಣ ಸಂದಾಯ ಮೊಹರು ಹಾಕಲಾದ ಚಲನ್) ಅನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿದ್ದು, ಚಲನ್ ಅಪ್‌ಲೋಡ್ ಮಾಡದೆ ಇದ್ದಲ್ಲಿ ಅಂತಹ ಅನ್‌ಲೈನ್ ಅರ್ಜಿಯನ್ನು ತಿರಸ್ಕರಿಸಲಾಗುವುದು.

4. ಅರ್ಹತಾ ಷರತ್ತುಗಳು:-

A) ಭಾರತೀಯ ನಾಗರೀಕನಾಗಿರತಕ್ಕದ್ದು.
B) ಅಭ್ಯರ್ಥಿಗಳು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವವಿರುವ ಯಾವದೇ ದೈಹಿಕ / ಮಾನಸಿಕ ನ್ಯೂನತೆಯಿಂದ ಮುಕ್ತರಾಗಿರತಕ್ಕದ್ದು.
C) ಅಭ್ಯರ್ಥಿಯು ಈ ಹಿಂದೆ ಯಾವುದೇ ಸರ್ಕಾರದ ಸೇವೆಯಿಂದ ವಜಾಗೊಂಡಿರಬಾರದು.

5. ಶೈಕ್ಷಣಿಕ ವಿದ್ಯಾರ್ಹತೆ:-

ದ್ವಿತೀಯ ಪಿ.ಯು.ಸಿ ಅಥವಾ ಸಿ.ಬಿ.ಎಸ್.ಸಿ / ಐ.ಸಿ.ಎಸ್.ಸಿ ನಡೆಸುವ 12 ನೇ ತರಗತಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು. (ಗ್ರಾಮಲೆಕ್ಕಿಗರ ಹುದ್ದೆಗೆ ಅರ್ಜಿಸಲ್ಲಿಸುವ ದಿನಾಂಕ-20.05.2015ಕ್ಕೆ ಮುಂಚಿತವಾಗಿ ತೇರ್ಗಡೆ ಹೊಂದಿ ಅಂಕಪಟ್ಟಿಯನ್ನು ಪಡೆದುಕೊಂಡಿರತಕ್ಕದ್ದು) ಇತರೆ ತತ್ಸಮಾನ ವಿದ್ಯಾರ್ಹತೆಯನ್ನು ಪರಿಗಣಿಸಲು ನಿಯಮದಲ್ಲಿ ಅವಕಾಶವಿರುವುದಿಲ್ಲ ಎಂಬುದನ್ನು ಸ್ಪಷ್ಟಪಡಿಸಿದೆ. (ದ್ವಿತೀಯ ಪಿ.ಯು.ಸಿ ಅಥವಾ ಸಿ.ಬಿ.ಎಸ್.ಸಿ / ಐ.ಸಿ.ಎಸ್.ಸಿ ಯ 12ನೇ ತರಗತಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ ಅಭ್ಯರ್ಥಿ ಹೊರತುಪಡಿಸಿದಂತೆ ಬೇರೆ ತತ್ಸಮಾನ ವಿದ್ಯಾರ್ಹತೆ ಹೊಂದಿರುವುದಾಗಿ ಸಲ್ಲಿಸುವ ಅನ್‌ಲೈನ್ ಅರ್ಜಿಗಳನ್ನು ಯಾವುದೇ ಮುನ್ಸೂಚನೆಯನ್ನು ನೀಡದೆ ತಿರಸ್ಕರಿಸಲಾಗುವುದು.)

6. **(1) ವೇತನ ಶ್ರೇಣಿಃ -ರೂ. 11600-200-12000-250-13000-300-14200-350-15600-400-17200-450-19000-500-21000**

**(2) ವಯೋಮಿತಿ:-** ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ:-20.05.2015ಕ್ಕೆ ಅಭ್ಯರ್ಥಿಯು ಈ ಕೆಳಕಂಡಂತೆ ವಯೋಮಿತಿ ಹೊಂದಿರತಕ್ಕದ್ದು.

a) ಕನಿಷ್ಟ 18 ವರ್ಷ

b) ಗರಿಷ್ಟ ವಯೋಮಿತಿ.

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| 2ಎ, 2ಬಿ, 3ಎ, 3ಬಿ | 38 ವರ್ಷ |
| ಪ.ಜಾತಿ/ಪ.ಪಂಗಡ /ಪ್ರವರ್ಗ-1 | 40 ವರ್ಷ |

ಎಸ್.ಎಸ್.ಎಲ್.ಸಿ ಅಥವಾ ವರ್ಗಾವಣೆ ಪ್ರಮಾಣ ಪತ್ರ [ಟಿ.ಸಿ]ಅಥವಾ ಕ್ಯೂಮಿಲೇಟಿವ್ ರೆಕಾರ್ಡ್‌ನಲ್ಲಿ ನಮೂದಿಸಿರುವ ಜನ್ಮ ದಿನಾಂಕವನ್ನು ಆಯ್ಕೆ ಪ್ರಾಧಿಕಾರವು ಪರಿಗಣಿಸುವುದು. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ. ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ)ನಿಯಮಗಳು 1977 ರ ನಿಯಮ 6 ರಂತೆ ವಯೋಮಿತಿಯನ್ನು ಅದರಲ್ಲಿ ತಿಳಿಸಿರುವ ಮಟ್ಟಿಗೆ ಸಂಬಂಧಪಟ್ಟ ದಾಖಲೆ ಒದಗಿಸಿದಲ್ಲಿ ಹೆಚ್ಚಿಸುವ ಬಗ್ಗೆ ಮೂಲ ದಾಖಲೆಗಳ ಪರಿಶೀಲನೆ ವೇಳೆ ಪರಿಶೀಲಿಸಲಾಗುವುದು. ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 6ರಂತೆ ಗರಿಷ್ಠ ವಯೋಮಿತಿಯನ್ನು ಈ ಮುಂದಿನ ಪ್ರಕರಣಗಳಲ್ಲಿ ಮುಂದೆ ಹೇಳಿರುವಷ್ಟರ ಮಟ್ಟಿಗೆ ಹೆಚ್ಚಿಸಲು ಅವಕಾಶವಿದೆ.

c) ಸರ್ಕಾರದ ಅಥವಾ ಸ್ಥಳೀಯ ಪ್ರಾಧಿಕಾರ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪಿಸಲಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಅಡಿಯಲ್ಲಿನ ಸರ್ಕಾರದಿಂದ ಸ್ಥಾಪಿತವಾಗಿದ್ದು ಮತ್ತು ಸರ್ಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ನಿಗಮದ ಅಡಿಯಲ್ಲಿ ಹುದ್ದೆಯನ್ನು ಧಾರಣ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಆತ ಅಂಥ ಹುದ್ದೆಯನ್ನು ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದ್ದಷ್ಟು ಅಥವಾ (ಹತ್ತು) ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

d) ಮಾಜಿ ಸೈನಿಕನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ ಮೂರು ವರ್ಷಗಳು ಮತ್ತು ಇದಕ್ಕೆ ಕೇಂದ್ರದ ಸಶಸ್ತ್ರ ಪಡೆಗಳಲ್ಲಿ ಅವನು ಸೇವೆ ಸಲ್ಲಿಸಿರುವಷ್ಟು ವರ್ಷಗಳನ್ನು ಸೇರಿಸಬೇಕು.

e) ಪೂರ್ಣಾವಧಿ ಕೆಡೆಟ್ ಇನ್ ಸ್ಟ್ರಕ್ಟರ್ ಆಗಿ ಸೇವೆ ಸಲ್ಲಿಸಿದ ತರುವಾಯ, ರಾಷ್ಟ್ರೀಯ ಕೆಡೆಟ್ ದಳದಿಂದ ಬಿಡುಗಡೆ ಮಾಡಿದ ಅಭ್ಯರ್ಥಿಯ ಸಂದರ್ಭದಲ್ಲಿ , ಹಾಗೆ ಕೆಡೆಟ್ ಇನ್‌ಸ್ಟ್ರಕ್ಟರಾಗಿ ಆತನು ಸೇವೆ ಸಲ್ಲಿಸಿರುವಷ್ಟು ವರ್ಷಗಳು.

f) ರಾಜ್ಯ ಸರ್ಕಾರ ಪ್ರಾಯೋಜಿತ ಗ್ರಾಮೀಣ ಕೈಗಾರೀಕರಣ ಯೋಜನೆಯಲ್ಲಿ ನೇಮಕಗೊಂಡ ಗ್ರಾಮ ಸಮೂಹ ಇನ್ಸ್‌ಪೆಕ್ಟರಾಗಿ ಆತ ಸೇವೆ ಸಲ್ಲಿಸಿರುವಷ್ಟು ವರ್ಷಗಳು.

g) ಅಂಗವಿಕಲನಾಗಿರುವ ಸಂದರ್ಭದಲ್ಲಿ ಹತ್ತು ವರ್ಷಗಳು.

h) ಈ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಹುದ್ದೆಯನ್ನು ಧಾರಣೆ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಅಂಥ ಹುದ್ದೆಯನ್ನು ಆತನು ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದ್ದಷ್ಟು ವರ್ಷಗಳು ಅಥವಾ ಐದು ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

i) ಅಭ್ಯರ್ಥಿ ವಿಧವೆಯಾಗಿದ್ದಲ್ಲಿ ಹತ್ತು ವರ್ಷಗಳು.

j) ಜೀತ ಕಾರ್ಮಿಕನಾಗಿದ್ದ ಅಭ್ಯರ್ಥಿಯಾಗಿದ್ದಲ್ಲಿ ಹತ್ತು ವರ್ಷಗಳು.

7. **ಜಾತಿ ಮೀಸಲಾತಿ ಪ್ರಮಾಣ ಪತ್ರಗಳು:**

**ಅ) ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಕಾಣಿಸಿರುವಂತೆ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು:**

a. ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ-ಡಿ

b. ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ-ಇ

c. 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ-ಎಫ್

ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. ಈ ಪ್ರಮಾಣ ಪತ್ರಗಳು ಈ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ:-20.05.2015ರ ಒಳಗೆ ಪಡೆದಿರಬೇಕು.

ಆ) ಜಾತಿ ಮೀಸಲಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಜಾತಿ ಪ್ರಮಾಣ ಪತ್ರದ ಬಗ್ಗೆ ಅಭ್ಯರ್ಥಿಗೆ ಸಂಬಂಧಿಸಿದ ಜಿಲ್ಲೆಯ ಜಿಲ್ಲಾಧಿಕಾರಿ,(ಅಧ್ಯಕ್ಷರು ಜಾತಿ ಆದಾಯ ಪರಿಶೀಲನಾ ಸಮಿತಿ) ಇವರಿಂದ ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

-4

8. ಗ್ರಾಮೀಣ ಅಭ್ಯರ್ಥಿ:-

a) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳಂತೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 01 ರಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರಬೇಕು.

b) ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ 2ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ದಿನಾಂಕ.20.05.2015 ರ ಒಳಗಾಗಿ ಪಡೆದಿಟ್ಟುಕೊಂಡಿರತಕ್ಕದ್ದು.

c) ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ-1ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ತಹಶೀಲ್ದಾರರಿಂದ ದಿನಾಂಕ.20.05.2015ರ ಒಳಗೆ ಪಡೆದಿರಬೇಕು.

ಸೂಚನೆ:- ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ನಮೂನೆ-2ರಲ್ಲಿನ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಪಡೆದಿರತಕ್ಕದ್ದು.( ಈ ಪ್ರಮಾಣ ಪತ್ರ ದಿನಾಂಕ.20.05.2015ರೊಳಗೆ ಪಡೆದಿರಬೇಕು)

09. ಕನ್ನಡ ಮಾಧ್ಯಮ ಅಭ್ಯರ್ಥಿ:- ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು. ( ಈ ಪ್ರಮಾಣ ಪತ್ರ ದಿನಾಂಕ.20.05.2015ರೊಳಗೆ ಪಡೆದಿರಬೇಕು)

10. ಯೋಜನಾ ನಿರಾಶ್ರಿತ ಅಭ್ಯರ್ಥಿ:- ಯೋಜನೆಗಳಿಂದ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಸುತ್ತೋಲೆ ಸಂಖ್ಯೆ ಸಿಆಸುಇ 44 ಸೇನೇನಿ 2001, ದಿನಾಂಕ.27.07.2001ರಲ್ಲಿ ನಿಗಧಿಪಡಿಸಲಾದ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಶೀಲ್ದಾರ್‌ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ದಿನಾಂಕ.20.05.2015ರೊಳಗೆ ಪಡೆದಿರಬೇಕು.

11. ಅಂಗವಿಕಲರ ಮೀಸಲಾತಿ ಬಗ್ಗೆ:- ಕರ್ನಾಟಕ ನಾಗರೀಕ ಸೇವಾ(ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ9(1-ಎ)ರ ಅನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್ ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇಕಡ 5 ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 128 ಸೆನೆನಿ 2006, ದಿನಾಂಕ:-01.08.2009ರಂತೆ ಮೀಸಲಾತಿ ನೀಡಲಾಗುವುದು. ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 52 ಎಸ್‌ಎಸ್‌ಆರ್ 99, ದಿನಾಂಕ.23.06.2012ರಂತೆ ಗ್ರಾಮಲೆಕ್ಕಿಗರ ಹುದ್ದೆಗಳಲ್ಲಿ ಅಂಗವಿಕಲರ ಮೀಸಲಾತಿಯನ್ನು ಈ ಕಾಣಿಸಿದ ವರ್ಗಗಳಿಗೆ ಮಾತ್ರ ಕಲ್ಪಿಸಲಾಗಿದೆ.

1.ಕುಷ್ಠ ರೋಗದಿಂದ ಗುಣಮುಖರಾದವರು (Leprosy Cured) 2.ಶ್ರವಣದೋಷವುಳ್ಳವರು(Hearing impaired) 3.ದೈಹಿಕ ಅಂಗವಿಕಲರು(Loco motor Disability) 4.ಮಾನಸಿಕ ಅಸ್ವಸ್ಥತೆಯಿಂದ ಗುಣಮುಖರಾದವರು(Mentally ill)

ಈ ಮೇಲಿನ ಅಂಗವಿಕಲರು ಹೊರತುಪಡಿಸಿ ಇತರ ದೈಹಿಕ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಗ್ರಾಮಲೆಕ್ಕಿಗರ ಹುದ್ದೆಗೆ ಅರ್ಜಿಸಲ್ಲಿಸಲು ಅರ್ಹರಿರುವುದಿಲ್ಲ. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ. ಸಿಆಸುಇ 115 ಸೆನೆನಿ 2005, ದಿನಾಂಕ.19.11.2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ದಿನಾಂಕ.20.05.2015ರ ಒಳಗೆ ಪಡೆದುಕೊಂಡಿರತಕ್ಕದ್ದು. ಬೇರೆ ಯಾವುದೇ ನಮೂನೆಗಳಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲು ಬರುವುದಿಲ್ಲ.

ಸೂಚನೆ:- ಈ ಮೇಲಿನ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ.20.05.2015ರೊಳಗೆ ಅರ್ಹತೆಯನ್ನು ಪಡೆದಿರಬೇಕು. ತಾತ್ಕಾಲಿಕ ಪರಿಶೀಲನಾ ಪಟ್ಟಿಯಲ್ಲಿ ಪ್ರಕಟಗೊಂಡ ಅಭ್ಯರ್ಥಿಗಳು ಮಾತ್ರ ನೇಮಕಾತಿ ಪ್ರಾಧಿಕಾರದ ಸೂಚಿಸುವ ದಿನಾಂಕದಂದು ಮೂಲ ಪ್ರಮಾಣ ಪತ್ರಗಳನ್ನು ತಪ್ಪದೆ ಹಾಜರುಪಡಿಸತಕ್ಕದ್ದು. ಮೂಲ ಪ್ರಮಾಣ ಪತ್ರಗಳನ್ನು ಹಾಜರ್ಪಡಿಸದಿರುವ ಅಭ್ಯರ್ಥಿಗಳ ಅರ್ಜಿಯನ್ನು ಯಾವುದೇ ಸೂಚನೆಯನ್ನು ನೀಡದೆ ತಿರಸ್ಕೃತಗೊಳಿಸಲಾಗುವುದು.

-5

12. ಆಯ್ಕೆ ವಿಧಾನ:– ಕರ್ನಾಟಕ ಜನರಲ್ ಸರ್ವೀಸಸ್(Revenue Subordinate Branch) (Cadre & Recruitment) (ತಿದ್ದುಪಡಿ) ನಿಯಮಗಳು 2008 ಮತ್ತು 2009 ಹಾಗೂ ಕರ್ನಾಟಕ ನಾಗರೀಕ ಸೇವಾ(ಸಾಮಾನ್ಯ ನೇಮಕಾತಿ) ನಿಯಮಗಳು 1977ರ ಪ್ರಕರ ಅಭ್ಯರ್ಥಿಯನ್ನು ದ್ವಿತೀಯ ಪಿ.ಯು.ಸಿ ಪರೀಕ್ಷೆ ಅಥವಾ CBSE ಅಥವಾ ICSE ನಡೆಸುವ 12ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಅಂಕಗಳ (on merit) ಆಧಾರದ ಮೇಲೆ ಆಯಾಯಾ ಮೀಸಲಾತಿ ಪ್ರವರ್ಗಕ್ಕೆ ಸಂಬಂಧಿಸಿದಂತೆ ಆಯ್ಕೆ ಮಾಡಲಾಗುವುದು.

13. ಪ್ರಮುಖ ಸೂಚನೆಗಳು:

ಪ್ರಕಟಗೊಳ್ಳುವ ತಾತ್ಕಾಲಿಕ ಪರಿಶೀಲನಾ ಪಟ್ಟಿಯಲ್ಲಿನ ಅಭ್ಯರ್ಥಿಗಳು ಈ ಕೆಳಕಂಡ ಮೂಲ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿದ ದಿನಾಂಕದಂದು ಪರಿಶೀಲನೆಗೆ ಹಾಜರ್‌ಪಡಿಸತಕ್ಕದ್ದು. ಹಾಗೂ ಮೂಲ ಪ್ರಮಾಣ ಪತ್ರಗಳನ್ನು ಪತ್ರಾಂಕಿತ ಅಧಿಕಾರಿಯಿಂದ ದೃಢೀಕೃತ ಜೆರಾಕ್ಸ್ ನಕಲನ್ನು ಜೊತೆಯಲ್ಲಿ ಹಾಜರ್ಪಡಿಸತಕ್ಕದ್ದು.

- ❖ ದ್ವಿತೀಯ ಪಿ.ಯು.ಸಿ ಪರೀಕ್ಷೆ ಅಥವಾ CBSE ಅಥವಾ ICSE ನಡೆಸುವ 12ನೇ ತರಗತಿ ಪರೀಕ್ಷೆಯ ಪ್ರಮಾಣ ಪತ್ರ.
- ❖ ಹುಟ್ಟಿದ ದಿನಾಂಕ ಸಮರ್ಥನೆಗಾಗಿ (ಎಸ್.ಎಸ್.ಎಲ್.ಸಿ) ತೇರ್ಗಡೆ ಪ್ರಮಾಣ ಪತ್ರ ಹಾಗೂ ಕ್ಯೂಮ್ಯೂಲೇಟಿವ್ ದಾಖಲೆ.
- ❖ ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಹಾಲಿ ಸೇವೆ ಸಲ್ಲಿಸಿರುತ್ತಿರುವ ಸಕ್ಷಣ ಪ್ರಾಧಿಕಾರಿಯಿಂದ ಗ್ರಾಮಲೆಕ್ಕಿಗರ ಹುದ್ದೆಗೆ ಅರ್ಜಿಯನ್ನು ಸಲ್ಲಿಸಲು ನಿರಾಕ್ಷೇಪಣ ಪ್ರಮಾಣ ಪತ್ರ (No Objection Certificate) ಪಡೆದಿರಬೇಕು. (ಅನುಬಂಧ–6)
- ❖ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ (ನಮೂನೆ-ಡಿ) ಮತ್ತು ಪ್ರವರ್ಗ-1(ನಮೂನೆ-ಇ) ಹಾಗೂ 2ಎ, 2ಬಿ, 3ಎ, 3ಬಿ (ನಮೂನೆ-ಎಫ್) ಪಡೆದಿರತಕ್ಕದ್ದು.
- ❖ ಯೋಜನಾ ನಿರ್ವಸತಿಗರ ಕುಟುಂಬಕ್ಕೆ ಸೇರಿದ ಅಭ್ಯರ್ಥಿಗಳು, ವಿಧವೆಯರು, ಜೀತ ಕಾರ್ಮಿಕರು, ಇವರು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
- ❖ ಗ್ರಾಮೀಣ ಅಭ್ಯರ್ಥಿ ಮೀಸಲಾತಿ ಪ್ರಮಾಣ ಪತ್ರ.
- ❖ ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ.
- ❖ ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿಹೊಂದಿದ (Discharge Certificate) ಬಗೆಗಿನ ಪ್ರಮಾಣ ಪತ್ರ.
- ❖ ಅಂಗವಿಕಲ ಅಭ್ಯರ್ಥಿಗಳು ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪಡೆದ ಪ್ರಮಾಣ ಪತ್ರ .
- ❖ ಕಂಪ್ಯೂಟರ್ ಜ್ಞಾನ (ಬೇಸಿಕ್) ಹೊಂದಿರುವ ಬಗ್ಗೆ ಪ್ರಮಾಣ ಪತ್ರ.

(ಈ ಮೇಲ್ಕಾಣಿಸಿದ ಪ್ರಮಾಣ ಪತ್ರಗಳನ್ನು ಸರ್ಕಾರ ನಿಗದಿಪಡಿಸಿದ ನಮೂನೆಯಲ್ಲಿ ಅಭ್ಯರ್ಥಿಗಳು ನಿಗಧಿತ ದಿನಾಂಕ.20.05.2015ರ ಒಳಗಾಗಿ ಹೊಂದಿರತಕ್ಕದ್ದು, ಹಾಗೂ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಮೆರಿಟ್ ಮೇಲೆ ಆಯ್ಕೆ ಆಗುವ ಅಭ್ಯರ್ಥಿಗಳು ಪರಿಶೀಲನೆಗೆ ನಿಗದಿಪಡಿಸುವ ದಿನಾಂಕದಂದು ಹಾಜರ್ಪಡಿಸತಕ್ಕದ್ದು )

14. ಸಾಮಾನ್ಯ ಸೂಚನೆಗಳು:

1. ನೈತಿಕ ದುರ್ನಡತೆಯಿಂದಾಗಿ / ನೀತಿ ಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ /ಕೇಂದ್ರ/ಸ್ಥಳೀಯ ಸಂಸ್ಥೆ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನೀತಿ ಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ / ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ / ಸೇವೆಯಿಂದ ವಜಾ ಮಾಡಲ್ಪಟ್ಟಿದ್ದು ಕಂಡುಬಂದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.

2. ಅರ್ಜಿಯಲ್ಲಿ ತಪ್ಪು / ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಪ್ರಯತ್ನ ಮಾಡಿರುವುದು ಪ್ರಾಧಿಕಾರದ ಗಮನಕ್ಕೆ ಬಂದ ತಕ್ಷಣ ಅಂತಹ ಅಭ್ಯರ್ಥಿಗಳ ವಿರುದ್ಧ ಕ್ರಿಮಿನ್ ಮೊಕದಮೆಯನ್ನು ದಾಖಲಿಸಲಾಗುವುದು.

3. ಅರ್ಜಿಯಲ್ಲಿ ನೀಡುವ ವಿಳಾಸ ಹಾಗೂ ಮೊಬೈಲ್ ಸಂಖ್ಯೆ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

4. ಅರ್ಜಿಯನ್ನು ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಗಳು ಮುನ್ನೆಚ್ಚರಿಕೆಯನ್ನು ವಹಿಸಬೇಕಾಗುತ್ತದೆ. ಒಮ್ಮೆ ಅರ್ಜಿಯನ್ನು ಸಲ್ಲಿಸಿ ಚಲನ್ ಪ್ರತಿ ಮುದ್ರಿತಗೊಂಡಲ್ಲಿ ಆನ್‌ಲೈನ್ ಅರ್ಜಿಯಲ್ಲಿ ಆಗಿರುವ ಯಾವುದೇ ತಪ್ಪುಗಳನ್ನು ಸರಿಪಡಿಸಲು ಸಾಧ್ಯವಾಗುವುದಿಲ್ಲ.

-6

5. ಒಬ್ಬ ಅಭ್ಯರ್ಥಿ ಒಂದಕ್ಕಿಂತ ಹೆಚ್ಚು ಆನ್‌ಲೈನ್ ಅರ್ಜಿಯನ್ನು ಸಲ್ಲಿಸಿದರೆ ಆ ಅಭ್ಯರ್ಥಿಯು ಕೊನೆಯದಾಗಿ ಸಲ್ಲಿಸಿರುವ ಆನ್‌ಲೈನ್ ಅರ್ಜಿಗೆ ಶುಲ್ಕವನ್ನು ಪಾವತಿಸಿ ಚಲನ್ ಅಪ್ ಲೋಡ್ ಮಾಡಿದಲ್ಲಿ ಆ ಕೊನೆಯ ಅರ್ಜಿಯನ್ನು ಆಯ್ಕೆ ಪ್ರಕ್ರಿಯೆಯಲ್ಲಿ ಮುಂದುವರೆಸಲಾಗುವುದು. ಹಾಗೂ ಆ ಅಭ್ಯರ್ಥಿಯ ಉಳಿದ ಎಲ್ಲಾ ಆನ್‌ಲೈನ್ ಅರ್ಜಿಯನ್ನು ತಿರಸ್ಕರಿಸಲಾಗುವುದು.

6. ತಾತ್ಕಾಲಿಕ ಪಟ್ಟಿ ಪ್ರಕಟಗೊಂಡ ದಿನಾಂಕದಿಂದ 15 ದಿನಗಳ ವರೆಗೆ ಅಭ್ಯರ್ಥಿಗಳಿಂದ ಆಕ್ಷೇಪಣೆ ಸ್ವೀಕರಿಸಲಾಗುವುದು. ನಂತರದಲ್ಲಿ ಬಂದ ಆಕ್ಷೇಪಣೆಗಳನ್ನು ತಿರಸ್ಕರಿಸಲಾಗುವುದು.

7. ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.

8 .ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು http://tumkur.nic.inನಲ್ಲಿ ಪ್ರಕಟಿಸಲಾಗುವುದು. ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿನ ಅಭ್ಯರ್ಥಿಗಳಿಗೆ ಪರಿಶೀಲನೆಗೆ ಹಾಜರಾಗಲು ಪ್ರತ್ಯೇಕವಾಗಿ ಪತ್ರ ವ್ಯವಹಾರ ಈ ಪ್ರಾಧಿಕಾರದಿಂದ ಮಾಡಲಾಗುವುದಿಲ್ಲ. ಅಭ್ಯರ್ಥಿಗಳು ವೆಬ್‌ಸೈಟ್‌ಅನ್ನು ಗಮನಿಸತಕ್ಕದ್ದು.

9. ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆಪಟ್ಟಿಯಲ್ಲಿ ಪ್ರಕಟವಾಗಿದೆ ಎಂಬ ಮಾತ್ರಕ್ಕೆ ಅಭ್ಯರ್ಥಿಗೆ ನೇಮಕಾತಿಯ ಯಾವುದೇ ಹಕ್ಕು ದೊರೆಯುವುದಿಲ್ಲ.

10. ಸರ್ಕಾರದಿಂದ ಆಗಿಂದಾಗ್ಗೆ ನೇರ ನೇಮಕಾತಿಯಲ್ಲಿ ಮೀಸಲಾತಿಗೆ ಸಂಬಂಧಿಸಿದಂತೆ ಹೊರಡಿಸಲಾಗುವ ಸುತ್ತೋಲೆ / ಅಧಿಸೂಚನೆ ಅಥವಾ ಸ್ಪಷ್ಟೀಕರಣಗಳನ್ವಯ ಕ್ರಮವಹಿಸಲಾಗುತ್ತದೆ.

11. ಅರ್ಜಿ ತುಂಬುವ ವಿಧಾನ ಹಾಗೂ ಹೆಚ್ಚಿನ ವಿವರಗಳು ತುಮಕೂರು ಜಿಲ್ಲಾಧಿಕಾರಿ ಕಛೇರಿಯ ಅಧಿಕೃತ ವೆಬ್‌ಸೈಟ್ http://tumkur.nic.in ಮತ್ತು http://tumkur-va.kar.nic.in ರಲ್ಲಿ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ. ಮತ್ತು ಸ್ಪಷ್ಟೀಕರಣ ಅಗತ್ಯವಿದ್ದಲ್ಲಿ ಸಹಾಯವಾಣಿ ಸಂಖ್ಯೆ 0816-2278718ಗೆ ಸರ್ಕಾರಿ ರಜೆ ದಿನಗಳನ್ನು ಹೊರತುಪಡಿಸಿ ಉಳಿದಂತೆ ಕಛೇರಿಯ ಕೆಲಸದ ವೇಳೆ ಬೆಳಗ್ಗೆ 10-00 ರಿಂದ 5-30ರ ಒಳಗೆ ಸಂಪರ್ಕಿಸಬಹುದಾಗಿದೆ.

12. ಗ್ರಾಮಲೆಕ್ಕಿಗರ ನೇರ ನೇಮಕಾತಿ ಪ್ರಕ್ರಿಯೆ ಪಾರದರ್ಶಕವಾಗಿ ಮೆರಿಟ್ ಮತ್ತು ರೋಸ್ಟರ್ ನಿಯಮಗಳಂತೆ ನಡೆಸಲಿದ್ದು, ಅಭ್ಯರ್ಥಿಗಳು ಯಾವುದೇ ವೆಕ್ತಿಗಳಿಂದ ಹರಡುವ ವದಂತಿಗಳಿಗೆ ಆಮಿಶಗಳಿಗೆ ಕಿವಿಕೊಡದೆ ಮೇಲೆ ತಿಳಿಸಲಾದ ಸೂಚನೆಗಳನ್ನು ಪಾಲಿಸಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸತಕ್ಕದ್ದು.

17/4/15

(ಕೆ.ಎಸ್.ಸತ್ಯಮೂರ್ತಿ)
ಜಿಲ್ಲಾಧಿಕಾರಿ, ಹಾಗೂ ಅಧ್ಯಕ್ಷರು,
ಗ್ರಾಮಲೆಕ್ಕಿಗರ ನೇರ ನೇಮಕಾತಿ ಪ್ರಾಧಿಕಾರ.
ತುಮಕೂರು ಜಿಲ್ಲೆ. ತುಮಕೂರು.

16/4/2015

ಇವರಿಗೆ:-

1. ಸಂಕಲನಾಧಿಕಾರಿ, ಸರ್ಕಾರಿ ಹೊರ ವಲಯ ಮುದ್ರಾಣಾಲಯ, ಆರ್.ವಿ.ಕಾಲೇಜು ಅಂಚೆ, 8ನೇ ಮೈನ್, ಮೈಸೂರು ರಸ್ತೆ, ಕೆಂಗೇರಿ ಬೆಂಗಳೂರು-560059. ಇವರಿಗೆ ಕಳುಹಿಸುತ್ತಾ, ಈ ತಿದ್ದುಪಡಿ ಅಧಿಸೂಚನೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ ಅದರ 100 ಪ್ರತಿಗಳನ್ನು ಜಿಲ್ಲಾಧಿಕಾರಿ, ತುಮಕೂರು ಜಿಲ್ಲೆ ಇವರಿಗೆ ಒದಗಿಸಲು ಕೋರಲಾಗಿದೆ.

ಪ್ರತಿಯನ್ನು:

1. ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಕರ್ನಾಟಕ ಸರ್ಕಾರ , ಬಹು ಮಹಡಿಗಳ ಕಟ್ಟಡ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.

3. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಕಂದಾಯ ಇಲಾಖೆ, 2ನೇ ಮಹಡಿ, ಬಿ.ಎಂ.ಟಿ.ಸಿ ಕಟ್ಟಡ, ಕೆಂಗಲ್ ಹನುಮಂತಯ್ಯ ರಸ್ತೆ, ಶಾಂತಿನಗರ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
5. ರಾಜ್ಯದ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಯವರಿಗೆ, ನಿಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಹಾಗೂ ನಿಮ್ಮ ಜಿಲ್ಲಾ ವ್ಯಾಪ್ತಿಯ ಎಲ್ಲಾ ತಾಲ್ಲೂಕುಗಳ ತಹಶೀಲ್ದಾರ್ ರವರ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕರಟಿಸಲು ಕೋರಿದೆ.
6. ಡೆಪ್ಯೂಟಿ ಡೈರೆಕ್ಟರ್ ಜನರಲ್, ರಾಷ್ಟ್ರೀಯ ವಿಜ್ಞಾನ ಸೂಚನಾ ಕೇಂದ್ರ, ವಿ.ವಿ.ಟವರ್, ಡಾ.ಅಂಬೇಡ್ಕರ್ ರಸ್ತೆ, ಬೆಂಗಳೂರು.
7. ರಾಷ್ಟ್ರೀಯ ವಿಜ್ಞಾನ ಸೂಚನಾಧಿಕಾರಿ, ರಾಷ್ಟ್ರೀಯ ವಿಜ್ಞಾನ ಸೂಚನಾ ಕೇಂದ್ರ, ತುಮಕೂರು ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
8. ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ, ತುಮಕೂರು ಜಿಲ್ಲೆ.
9. ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳು ಮತ್ತು ಅಲ್ಪಸಂಖ್ಯಾತರ ಇಲಾಖೆ, ತುಮಕೂರು ಜಿಲ್ಲೆ.
10. ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ತುಮಕೂರು ಜಿಲ್ಲೆ .
11. ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ತುಮಕೂರು ಜಿಲ್ಲೆ.
12. ವ್ಯವಸ್ಥಾಪಕರು, ಲೀಡ್ ಬ್ಯಾಂಕ್, ತುಮಕೂರು ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
13. ವ್ಯವಸ್ಥಾಪಕರು, (ಎ.ಜಿ.ಎಂ) ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, ಮುಖ್ಯ ಶಾಖೆ, ತುಮಕೂರು ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
14. ಉಪವಿಭಾಗಾಧಿಕಾರಿ, ತುಮಕೂರು / ಮಧುಗಿರಿ / ತಿಪಟೂರು , ಉಪವಿಭಾಗ ರವರಿಗೆ ಕಛೇರಿಯ ಸೂಚನಾ ಫಲಕದಲ್ಲಿ ತಿದ್ದುಪಡಿ ಅಧಿಸೂಚನೆಯನ್ನು ಪ್ರಕಟಿಸುವ ಕುರಿತು ಸೂಕ್ತ ಕ್ರಮವಹಿಸಲು ಸೂಚಿಸಿದೆ.
15. ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಹಶೀಲ್ದಾರ್‌ರರು ನಿಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಿ ವ್ಯಾಪಕವಾಗಿ ಪ್ರಚಾರ ಮಾಡುವ ಕುರಿತು ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದೆ.
16. ಈ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು / ಕಛೇರಿ ಪ್ರತಿಗಳು.